# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ, ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ 14 /2022-23 ದಿನಾಂಕ: 18.07.2022

**ದಿನಾಂಕ-18.07.2022 ರಂದು ನಡೆದಿರುವ ವಿಜಿನಾಪುರ ವಾರ್ಡ್ ಸಂಖ್ಯೆ-51 ರ ವಾರ್ಡ್ ಸಮಿತಿ ಸಭೆ ನಡುವಳಿಗಳು**

| | ಸದಸ್ಯರ ಹೆಸರು ಮತ್ತು ಪದನಾಮ | ಸದಸ್ಯರ ಹಾಜರು/ಗೈರು ಹಾಜರು |
|---|---|---|
| 1 | | |
| 2 | ಶ್ರೀ.ನಾಗಭೂಷಣ, ಸಹಾಯಕ ಅಭಿಯಂತರರು (ವಾರ್ಡ್ ನಂ.51) (ಕಾರ್ಯದರ್ಶಿ) | ಹಾಜರು |
| 3 | ಶ್ರೀ.ಮಧು (ಕಿ.ಆ.ಪ) ವಾರ್ಡ್ ನಂ.51 | ಹಾಜರು |
| 4 | ಶ್ರೀ.ಡಿ.ವಿ.ಮೋಹನ್ ಲೈವ್ ಸ್ಟಾಕ್ ಆಫೀಸರ್ | ಹಾಜರು |
| 5 | ಶ್ರೀ.ಸಂಜೀವಯ್ಯ (ಪಿ.ಎಸ್.ಐ, ಟ್ರಾಫಿಕ್) | ಹಾಜರು |
| 6 | ಶ್ರೀ.ರಂಗಯ್ಯ (ಜಲಮಾಪನಾಗಾರರು) ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರು |
| 7 | ಶ್ರೀ.ಶಿವರಾಮನ್ (ಬಿ.ಡಿ.ಎ ಲೇಔಟ್) | ಹಾಜರು |
| 8 | ಶ್ರೀ.ಅಭಿಲಾಷ್ ಜಿ ನಾಯರ್ | ಹಾಜರು |
| 9 | ಶ್ರೀ.ನಾಗರಾಜ್.ಕೆ | ಹಾಜರು |
| 10 | ಶ್ರೀ.ಸುರೇಶ್ | ಹಾಜರು |
| 11 | ಶ್ರೀ.ಸ್ವಾಮಿ | ಹಾಜರು |

ದಿನಾಂಕ-18-07-2022 ರಂದು ಪೂರ್ವಾಹ್ನ: 11.30 ಗಂಟೆ ಸಮಯದಲ್ಲಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯನದಾಗಿ ಶ್ರೀ.ನಾಗಭೂಷಣ.ಕೆ ಸಹಾಯಕ ಅಭಿಯಂತರರು ವಾರ್ಡ್ ನಂ.51, ಕಾರ್ಯದರ್ಶಿ ರವರು ಸಭೆಯಲ್ಲಿ ಹಾಜರಿರುವ ಸದಸ್ಯರುಗಳು ಮತ್ತು ಅಧಿಕಾರಿ ವೃಂಧದವರಿಗೆಲ್ಲಾ ಸ್ವಾಗತಕೋರಿದರು. ತದನಂತರ ಈ ಕೆಳಕಂಡ ವಿಷಯಗಳ ಬಗ್ಗೆ ಈ ಸಭೆಯಲ್ಲಿ ಚರ್ಚಿಸಲಾಯಿತು.

1. **ಶ್ರೀ.ಸ್ವಾಮಿ:-** ರವರು ಮಾತನಾಡಿ ವಿಜಿನಾಪುರ ವಾರ್ಡ್ ವ್ಯಾಪ್ತಿಯಲ್ಲಿ ಬಿಡಿಎ ಲೇಔಟ್ ಇಂದಿರಾ ಕ್ಯಾಂಟೀನ್ ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಒಳಚರಂಡಿಯ ಮ್ಯಾನ್‌ಹೋಲ್ ತುಂಬಿ ರಸ್ತೆಯ ಮೇಲೆ ಹರಿಯುತ್ತಿರುತ್ತದೆ. ಇದರಿಂದ ಪಾದಚಾರಿಗಳಿಗೆ, ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು.

<u>ಕ್ರಮ:-</u> ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಿಬ್ಬಂಧಿರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

2. **ಶ್ರೀ.ಅಭಿಲಾಷ್ ಜಿ ನಾಯರ್** ಸದಸ್ಯರು ರವರು ಮಾತನಾಡಿ ರಾಮಮೂರ್ತಿನಗರ ಮುಖ್ಯರಸ್ತೆಯಲ್ಲಿ ಪಾಲಿಕೆ ವತಿಯಿಂದ ಡಾಂಬರೀಕರಣ ಮಾಡಲಾಗಿದ್ದು, ಸದರಿ ರಸ್ತೆಯಲ್ಲಿರುವ ಮ್ಯಾನ್‌ಹೋಲ್‌ಗಳು ಕೆಳಭಾಗಕ್ಕೆ ಇಳಿದಿದ್ದು, ಇದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಸದರಿ ಮ್ಯಾನ್‌ಹೋಲ್‌ಗಳನ್ನು ರಸ್ತೆಯ ಸಮಕ್ಕೆ ಸಮತಟ್ಟು ಮಾಡಬೇಕೆಂದು ಇದರ ಬಗ್ಗೆ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು.

<u>ಕ್ರಮ:-</u> ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಿಬ್ಬಂಧಿರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

3. **ಶ್ರೀ.ನಾಗರಾಜ್** ರವರು ಮಾತನಾಡುತ್ತಾ, ಕೊತ್ತೂರು ಮುಖ್ಯರಸ್ತೆ ಮತ್ತು ಯಲ್ಲಮ್ಮ ದೇವಸ್ಥಾನ ಮುಖ್ಯರಸ್ತೆಯ ಚರಂಡಿಗಳಲ್ಲಿ ಹೂಳು ತುಂಬಿದ್ದು, ನೀರು ಸರಾಗವಾಗಿ ಹರಿಯದೇ ರಸ್ತೆಯ ಮೇಲೆ ಹರಿಯುತ್ತಿರುತ್ತದೆ. ಸದರಿ ಚರಂಡಿಗಳ ಹೂಳನ್ನು ತೆಗೆಯಬೇಕೆಂದು ಇದರ ಬಗ್ಗೆ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು.
ಕ್ರಮ:- ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ರವರಿಗೆ ಅಗತ್ಯ ಕ್ರಮವಹಿಂಸಲು ಸಭೆಯು ಸೂಚಿಸಿತು.

4. **ಶ್ರೀ.ಶಿವರಾಮನ್** ರವರು ಮಾತನಾಡಿ ಬಿ.ಡಿ.ಎ ಲೇಔಟ್‌ನ 3ನೇ'ಎ'ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯದೇ ಇರುವುದರಿಂದ ಪಾದಚಾರಿಗಳಿಗೆ, ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುತ್ತದೆ. ಇದರ ಬಗ್ಗೆ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು.
ಕ್ರಮ:- ಸಹಾಯಕ ಅಭಿಯಂತರರು (ವಿದ್ಯುತ್) ಕೆ.ಆರ್.ಪುರ ರವರಿಗೆ ಅಗತ್ಯ ಕ್ರಮವಹಿಂಸಲು ಸಭೆಯು ಸೂಚಿಸಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಅಧ್ಯಕ್ಷರು ರವರು ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯ ಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ಸಭೆಗೆ ಹಾಜರಾಗದ ಅಧಿಕಾರಿಗಳ ವಿರುದ್ಧ ಅಸಮಧಾನ ವ್ಯಕ್ತಪಡಿಸಿ ಮುಂದಿನ ಸಭೆಯಲ್ಲಿ ಎಲ್ಲರೂ ಹಾಜರಾಗಲೂ ಕ್ರಮಕೈಗೊಳ್ಳಲು ಕೋರಿಕೊಂಡಿದ್ದು, ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

**ವಾರ್ಡ್ ಸಮಿತಿ ಕಾರ್ಯದರ್ಶಿಗಳು,**

**ವಾರ್ಡ್ ನಂ.51, ವಿಜಿನಾಪುರ**